# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 154, ಬಸವನಗುಡಿ ಬೆಂಗಳೂರು.

ಸಂಖ್ಯೆ: ಸ.ಅ/ವಾ-154/2022-23 ದಿನಾಂಕ: 08-08-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

************

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 06-08-2022 ಶನಿವಾರ ವಾರ್ಡ್ ಸಂಖ್ಯೆ: 154, ಬಸವನಗುಡಿ ವಾರ್ಡ್ ಕಛೇರಿಯಲ್ಲಿ ನಡೆದ ಆಗಸ್ಟ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ: ಬಿಬಿಎಂಪಿ ವಾರ್ಡ್ ಕಛೇರಿ, ಬಸವನಗುಡಿ, ಎಸ್.ಆರ್. ಕಾಲೋನಿ ಹತ್ತಿರ
ಸಮಯ: ಬೆಳಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮಂಜುನಾಥ ರೆಡ್ಡಿ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ರಾಜೇಶ್ ಕೆ.ಎನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಸವನಗುಡಿ ಉಪವಿಭಾಗ |
| 3 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-154, ಬಸವನಗುಡಿ |
| 4 | ಕು. ಮಂಜುಶ್ರೀ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಡಾ॥ ದೀಕ್ಷಿತ್ | ಆರೋಗ್ಯ ವೈದ್ಯಾಧಿಕಾರಿ |
| | ಶ್ರೀಮತಿ. ಮಾಲಿನಿ. ಎಂ | ಬೀದಿ ದೀಪ ನಿರ್ವಹಣೆ |
| 6 | ಶ್ರೀ. ಮಯೂರ್ ಯಾದವ್ | ಬೆಸ್ಕಾಂ ಅಧಿಕಾರಿ |
| 7 | ಶ್ರೀ. ಪಿ.ಎಸ್ ಪ್ರತಾಪ್ | ಸಂಚಾರ ಪೋಲೀಸ್, ಬಸವನಗುಡಿ |
| 8 | ಶ್ರೀ. ಲಕ್ಷ್ಮೀಕಾಂತಭಟ್ | ಸಾರ್ವಜನಿಕರು |
| 9 | ಶ್ರೀ. ಅಕ್ಷಯ ಜೆ. ಕುಂಬ್ಳೆ | ಸಾರ್ವಜನಿಕರು |
| 10 | ಶ್ರೀ. ನಿತಿನ್ ಅರಸ್ | ಸಾರ್ವಜನಿಕರು |
| 11 | ಶ್ರೀ. ವೈ.ಎಸ್. ಶಿವಲಿಂಗಯ್ಯ | ಸಾರ್ವಜನಿಕರು |
| 12 | ಶ್ರೀ. ಸತೀಶ್ ಉರಾಳ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ಮಂಜುನಾಥ ರೆಡ್ಡಿ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಚರ್ಚಿಸಲಾಗಿ ಸಭೆಯಲ್ಲಿ ಹಾಜರಿದ್ದು, ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ರವರು ಮಾತನಾಡುತ್ತಾ ಮನೆಗಳಿಗೆ ನೀರಿನ ಸರಬರಾಜು ವೇಳೆಯನ್ನು ಬದಲಾಯಿಸಿದ್ದು, ಬದಲಾದ ಸಮಯದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ನೀರಿನ ವಿತರಣಾ ಸಮಯವನ್ನು ಬದಲಾಯಿಸಿಕೊಡಲು ಕೋರಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್‌ಗಳ ರಿಪೇರಿ ಮತ್ತು ರಸ್ತೆ ಬದಿಯಲ್ಲಿರುವ ನೀರಿನ ಟ್ಯಾಂಕ್‌ಗಳನ್ನು ಪರಿಶೀಲಿಸಿ ಅನುಪಯುಕ್ತ ಟ್ಯಾಂಕ್‌ಗಳನ್ನು ತೆರವುಗೊಳಿಸಲು ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.



Scanned with CamScanner

ಸಭೆಯಲ್ಲಿ ಸಂಚಾರಿ ಪೋಲೀಸರು ಹಾಗೂ ಕಾನೂನು ಸುವ್ಯವಸ್ಥೆ ಪೋಲೀಸ್ ರವರು ಹಾಜರಾಗಿದ್ದು ವ್ಯಾಪ್ತಿಯಲ್ಲಿನ ಸಂಚಾರ ದಟ್ಟಣೆ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಸಾರ್ವಜನಿಕರಾದ ಶ್ರೀ. ಲಕ್ಷ್ಮೀಕಾಂತಭಟ್ ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ಕ್ರಮಕೈಗೊಳ್ಳಲು ನೋಡಲ್ ಅಧಿಕಾರಿಗಳು ರವರು ಸದರಿಯವ ಸೂಚಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಉದ್ಯಾನವನಗಳಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು ಅನುಪಯುಕ್ತ ಬಾಟಲ್‌ಗಳನ್ನು ಉದ್ಯಾನವನಗಳಲ್ಲಿ ಹಾಕುತ್ತಿರುವ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದು ಈ ಬಗ್ಗೆ ಕ್ರಮಕೈಗೊಳ್ಳಲು ನೋಡಲ್ ಅಧಿಕಾರಿಗಳು ಸಭೆಯಲ್ಲಿದ್ದ ಪೋಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಮಲ್ಲಿಕಾರ್ಜುನ ರಸ್ತೆ ಮತ್ತು ಡಿ.ವಿ.ಜಿ ರಸ್ತೆಗಳಲ್ಲಿರುವ ಏಕಮುಖ ಸಂಚಾರವನ್ನು ತೆರವುಗೊಳಿಸಿಕೊಡಲು ಹಾಗೂ ವಾಹನಗಳ ನಿಲುಗಡೆಯನ್ನು ರಸ್ತೆಗಳ ಒಂದು ಪಕ್ಕದಲ್ಲಿ ಮಾತ್ರ ಅವಕಾಶಕೊಡಲು ಸಾರ್ವಜನಿಕರು ಕೋರಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ವಾರ್ಡ್ ವ್ಯಾಪ್ತಿಯಲ್ಲಿ ಮನೆಗಳಿಂದ ಕಸವನ್ನು ಸಾಗಿಸುವ ಆಟೋಗಳು ದುಸ್ಥಿತಿಯಲ್ಲಿದ್ದು ಆಟೋಗಳನ್ನು ದುರಸ್ಥಿ ಮಾಡಿಸಲು ಮತ್ತು ಸ್ವಚ್ಛತೆಯನ್ನು ಕಾಪಾಡಲು ಕೋರಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳ ಒಳಗೆ ಕಸ ಹೆಚ್ಚಾಗಿದ್ದು ಅದನ್ನು ತೆರವುಗೊಳಿಸಲು ಕ್ರಮಕೈಗೊಳ್ಳಲು ನೋಡಲ್ ಅಧಿಕಾರಿಗಳು ರವರು ಘನತ್ಯಾಜ್ಯ ವಿಭಾಗದ ಅಧಿಕಾರಿಗಳಿಗೆ ತಿಳಿಸಲು ಸೂಚಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯಲ್ಲಿನ ಮರಗಳ ರೆಂಬೆ ಕೊಂಬೆಗಳು ರಸ್ತೆಯಲ್ಲಿ ಅಳವಡಿಸಿರುವ ವಿದ್ಯುತ್ ದೀಪಗಳಿಗೆ ಅಡ್ಡಲಾಗಿದ್ದು ಬೆಳಕು ನೇರವಾಗಿ ರಸ್ತೆಗೆ ಬೀಳದಿರುವುದರಿಂದ ಮರಗಳ ರೆಂಬೆ ಕೊಂಬೆಗಳನ್ನು ತೆಗೆಯಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ. ಈ ಬಗ್ಗೆ ನೋಡಲ್ ಅಧಿಕಾರಿಗಳು ಸದರಿಯವರಿಗೆ ವಿಷಯ ತಿಳಿಸಿ ಕ್ರಮಕೈಗೊಳ್ಳಲು ತಿಳಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಬದಿ ಚರಂಡಿಗಳಲ್ಲಿನ ಹೂಳನ್ನು ಎತ್ತಿ ಮಳೆನೀರು ಸರಾಗವಾಗಿ ಹರಿಯುವಂತೆ ಮಾಡಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ. ಈಬಗ್ಗೆ ಕ್ರಮಕೈಗೊಂಡು ಮುಂದಿನ ಸಭೆಯಲ್ಲಿ ವರದಿ ನೀಡುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ತಿಳಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಆರೋಗ್ಯ ವೈದ್ಯಾಧಿಕಾರಿಗಳು ಮಾನ್ಯ ಸರ್ಕಾರದ ಯೋಜನೆಯಾದ ಪ್ರತಿ ವಾರ್ಡ್‌ನಲ್ಲಿ ನಮ್ಮ ಕ್ಲಿನಿಕ್ ಶುರುಮಾಡುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ. ಈ ಬಗ್ಗೆ ನಮ್ಮ ಕ್ಲಿನಿಕ್‌ಗಾಗಿ ಕಟ್ಟಡವನ್ನು ಗುರುತಿಸಿಕೊಡಲು ಸಭೆಯಲ್ಲಿ ಆರೋಗ್ಯ ವೈದ್ಯಾಧಿಕಾರಿಗಳು ತಿಳಿಸಿದ್ದು, ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿನ ಬ್ಯೂಗಲ್‌ರಾಕ್ ಉದ್ಯಾನವನದಲ್ಲಿ ಭಾನುವಾರ ಜಾನಪದ ಸಂಜೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ನೋಡಲ್ ಅಧಿಕಾರಿಗಳು ಸಾರ್ವಜನಿಕರಲ್ಲಿ ಕೋರಿರುತ್ತಾರೆ ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ಭಾವುಟಗಳ ಮಾರಾಟವನ್ನು ಪಾಲಿಕೆ ವತಿಯಿಂದ ಮಾಡುತ್ತಿದ್ದು ಸಾರ್ವಜನಿಕರು ಭಾವುಟಗಳನ್ನು ಖರೀದಿಸಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸಾರ್ವಜನಿಕರಲ್ಲಿ ವಿನಂತಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ಅಧ್ಯಕ್ಷರು ರವರು ಸಂಬಂಧಪಟ್ಟ ಇಲಾಖೆಗಳಾದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಹಾಗೂ ಘನತ್ಯಾಜ್ಯ ವಿಭಾಗದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿಗಳು | ಅಧ್ಯಕ್ಷರು |
| ಹಾಗೂ ಸಹಾಯಕ ಅಭಿಯಂತರರು | ಹಾಗೂ ನೋಡಲ್ ಅಧಿಕಾರಿಗಳು |
| ವಾರ್ಡ್ ಸಂಖ್ಯೆ: 154, ಬಸವನಗುಡಿ | ವಾರ್ಡ್ ಸಂಖ್ಯೆ: 154, ಬಸವನಗುಡಿ |

Scanned with CamScanner